ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು, "ಅಸ್ಸಲಾಮು ಅಲೈಕುಮ್" (ನಿಮ್ಮ ಮೇಲೆ ಶಾಂತಿ ಇರಲಿ) ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು, ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಹತ್ತು (ಪುಣ್ಯಗಳು)

ಇಮ್ರಾನ್ ಬಿನ್ ಹುಸೈನ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು, "ಅಸ್ಸಲಾಮು ಅಲೈಕುಮ್" (ನಿಮ್ಮ ಮೇಲೆ ಶಾಂತಿ ಇರಲಿ) ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು, ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಹತ್ತು (ಪುಣ್ಯಗಳು)". ನಂತರ ಇನ್ನೊಬ್ಬ ವ್ಯಕ್ತಿ ಬಂದು, "ಅಸ್ಸಲಾಮು ಅಲೈಕುಮ್ ವರಹ್ಮತುಲ್ಲಾಹ್" (ನಿಮ್ಮ ಮೇಲೆ ಶಾಂತಿ ಮತ್ತು ಅಲ್ಲಾಹುವಿನ ಕರುಣೆ ಇರಲಿ) ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು, ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಇಪ್ಪತ್ತು (ಪುಣ್ಯಗಳು)". ನಂತರ ಮತ್ತೊಬ್ಬ ವ್ಯಕ್ತಿ ಬಂದು, "ಅಸ್ಸಲಾಮು ಅಲೈಕುಮ್ ವರಹ್ಮತುಲ್ಲಾಹಿ ವಬರಕಾತುಹು" (ನಿಮ್ಮ
ಮೇಲೆ ಶಾಂತಿ, ಅಲ್ಲಾಹುವಿನ ಕರುಣೆ ಮತ್ತು ಅವನ ಆಶೀರ್ವಾದಗಳು ಇರಲಿ) ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು, ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ
ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಮೂವತ್ತು (ಪುಣ್ಯಗಳು)". [حسن] [رواه أبو داود والترمذي وأحمد والدارمي]

ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು "ಅಸ್ಸಲಾಮು ಅಲೈಕುಮ್" ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು. ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: ಅವನಿಗೆ ಹತ್ತು ಪುಣ್ಯಗಳು ಬರೆಯಲ್ಪಟ್ಟಿವೆ. ನಂತರ ಇನ್ನೊಬ್ಬ ವ್ಯಕ್ತಿ ಬಂದು "ಅಸ್ಸಲಾಮು ಅಲೈಕುಮ್ ವರಹ್ಮತುಲ್ಲಾಹ್" ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು. ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: ಅವನಿಗೆ ಇಪ್ಪತ್ತು ಪುಣ್ಯಗಳು. ನಂತರ ಮತ್ತೊಬ್ಬ ವ್ಯಕ್ತಿ ಬಂದು "ಅಸ್ಸಲಾಮು ಅಲೈಕುಮ್ ವರಹ್ಮತುಲ್ಲಾಹಿ ವಬರಕಾತುಹು" ಎಂದು ಹೇಳಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ ಪ್ರತ್ಯುತ್ತರ ನೀಡಿದರು. ನಂತರ ಆ ವ್ಯಕ್ತಿ ಕುಳಿತುಕೊಂಡರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: ಅವನಿಗೆ ಮೂವತ್ತು ಪುಣ್ಯಗಳು; ಅಂದರೆ,

ಪ್ರತಿಯೊಂದು ಪದಕ್ಕೂ ಹತ್ತು ಪುಣ್ಯಗಳು.

http://www.sunnah.global/hadeeth/kn/show/3587